ತಾಲ್ಲೂಕು	ಪಶುವೈದ್ಯಕೀಯ ಮೇಲ್ವಿಚಾರಕರು	ಪಶು ವೈದ್ಯಕೀಯ ಪರೀಕ್ಷಕರು	ಹಿರಿಯ ಪಶುವೈದ್ಯಕೀಯ ಪರೀಕ್ಷಕರು	ಪಶುವೈದ್ಯಕೀಯ ಸಹಾಯಕರು	ವಾಹನ ಚಾಲಕರು	ಡಿ ಗ್ರೂಪ್
ಶಿವಮೊಗ್ಗ	2	1	4	0	0	2
ಭದ್ರಾವತಿ	0	0	2	0	0	7
ತೀರ್ಥಹಳ್ಳಿ	1	0	8	9	0	15
ಶಿಕಾರಿಪುರ	1	1	4	9	0	6
ಹೊಸನಗರ	0	2	2	7	0	11
ಸಾಗರ	2	0	5	8	0	12
ಸೊರಬ	2	10	2	9	0	4
ಒಟ್ಟು	8	14	27	42	0	57

1816(2405) ಶ್ರೀ ಹಾಲಪ್ಪ ಹೆಚ್.(ಹೊಸನಗರ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ವಿವಿಧ ಇಲಾಖೆಯಿಂದ (ಬಿ.ಸಿ.ಎಂ. ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ನಿಗಮ) ಕೊರೆದ ಬಾವಿಗಳ ಸಂಖ್ಯೆ ಎಷ್ಟು;

ಆ) ಕೊರೆದ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದೆ ಇರುವುದು ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು;

ಈ) ವಿದ್ಯುತ್ ಸಂಪರ್ಕ ಕಲ್ಪಿಸದೆ ಇರುವುದರಿಂದ ಸಾರ್ವಜನಿಕರಿಗೆ (ಫಲಾನುಭವಿಗಳಿಗೆ) ಹಾಗೂ ಸರ್ಕಾರಕ್ಕೆ ನಷ್ಟವಾಗಿರುವುದು ಗಮನಕ್ಕೆ ಬಂದಿದೆಯೇ;

ಡಾ: ವೈ.ನಾಗಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಗಂಗಾ ಕಲ್ಯಾಣ ಸಾಮೂಹಿಕ ಮತ್ತು ವೈಯಕ್ತಿಕ ಕೊಳವೆಬಾವಿ ಯೋಜನೆಯಡಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಒಟ್ಟು 31.233 ಕೊಳವೆಬಾವಿಗಳನ್ನು, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಒಟ್ಟು 2676 ಕೊಳವೆಬಾವಿಗಳನ್ನು ಹಾಗೂ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಒಟ್ಟು 2180 ಕೊಳವೆಬಾವಿಗಳನ್ನು ಕೊರೆಯಲಾಗಿದೆ.

ಆ) ಹೌದು.

ಇ) ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ಒಟ್ಟು 6413 ಕೊಳವೆಬಾವಿಗಳಿಗೆ; ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಒಟ್ಟು 1379 ಕೊಳವೆಬಾವಿಗಳಿಗೆ ಹಾಗೂ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಒಟ್ಟು 829 ಕೊಳವೆಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಲು ಬಾಕಿ ಇವೆ.

ಈ) ಗಮನಕ್ಕೆ ಬಂದಿದೆ ದಿ: 29–12–04 ರಂದು ಮಾನ್ಯ ಉಪ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನದಂತೆ ಏಪ್ರಿಲ್ 2005 ರ ಮಾಹೆಯ ಅಂತ್ಯದೊಳಗೆ ಬಾಕಿ ಇರುವ ಎಲ್ಲಾ ಕೊಳವೆಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಲು ದಿ:23–2–2005 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಇವರು ವಿಭಾಗ ಮಟ್ಟದ ಎಲ್ಲಾ ಅಧಿಕಾರಿಗಳಿಗೆ ಪತ್ರ ಬರೆದು ಬಾಕಿ ಇರುವ ಎಲ್ಲಾ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ತಿಳಿಸಿದ್ದಾರೆ. ಅದರಂತೆ ಕಾರ್ಯ ಪ್ರಗತಿಯಲ್ಲಿದೆ.

1817(1794) ಶ್ರೀ ಕಾರಜೋಳ ಗೋವಿಂದ ವೆಂಕಟಪ್ಪ (ಮುಧೋಳ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಸಗಿವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಜನಾಂಗದ ವಿದ್ಯಾರ್ಥಿಗಳ ಶಿಕ್ಷಣ ಶುಲ್ಕವನ್ನು ಸರ್ಕಾರ ಸಮಾಜ ಕಲ್ಯಾಣ ಇಲಾಖೆಯ ಮೂಲಕ ಮರುಪಾವತಿ ಮಾಡಿದ ಮೊತ್ತವೆಷ್ಟು? (ಕಳೆದ ಮೂರು ವರ್ಷದ ವಿವರ ನೀಡುವುದು)

ಆ) ಸರ್ಕಾರದಿಂದ ಶುಲ್ಕ ಮರುಪಾವತಿ ವಿಳಂಬವಾಗುತ್ತಿದೆ ಎಂಬ ಕಾರಣಕ್ಕಾಗಿ ಪರಿಶಿಷ್ಟ ಜಾತಿಜನಾಂಗದ ವಿದ್ಯಾರ್ಥಿಗಳಿಂದ ಖಾಸಗಿ ವೈದ್ಯಕೀಯ ಕಾಲೇಜಿನವರು ಬಲವಂತದಿಂದ ಫೀಜ್ ಕಟ್ಟಲು ತಿಳಿಸಿ, ತಪ್ಪಿದ್ದಲ್ಲಿ, ಪರೀಕ್ಷೆಗೆ ಹಾಜರಾಗದಂತೆ ತಡೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ನಿಗದಿ ಮಾಡಿದ ಮರುಪಾವತಿ ಶುಲ್ಕವನ್ನು ಸರ್ಕಾರ ಬಾಕಿ ಉಳಿಸಿಕೊಂಡಿದೆಯೇ?

ಈ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಬಾಕಿ ಉಳಿಸಿಕೊಂಡ ಮೊತ್ತದ ವಿವರ ನೀಡಲಾಗುವುದೇ? (ವಿವರ ನೀಡುವುದು)

ಶ್ರೀ ವೈ.ನಾಗಪ್ಪ (ಮಾನ್ಯ ಸಮಾಜ ಕಲ್ಯಾಣ ಸಚಿವರು):

ಅ) <u>ಸಮಾಜ ಕಲ್ಯಾಣ ಇಲಾಖೆ:</u>

ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗಾಗಿ ಶುಲ್ಕ ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವುದಿಲ್ಲ. ಸರ್ಕಾರದ ಆದೇಶ ಸಂ:ಎಸ್‌ಡಬ್ಲ್ಯೂಎಲ್ 229 ಬಿಸಿಎ 80, ದಿನಾಂಕ:16–12–82 ರನ್ವಯ ಶುಲ್ಕ ಮರುಪಾವತಿಗೊಳಿಸ ಬೇಕಾದ ಪ್ರಾಧಿಕಾರವನ್ನು ಸೂಚಿಸಿದೆ. ಆ ಪ್ರಕಾರವಾಗಿ ವೈದ್ಯಕೀಯ ಶಿಕ್ಷಣಕ್ಕೆ ಸಂಬಂಧಪಟ್ಟಂತೆ ಖಾಸಗಿ:ಅನುದಾನಿತ:ಅನುದಾನರಹಿತ:ವೈದ್ಯಕೀಯ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳಿಗೆ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ,ಬೆಂಗಳೂರು ರವರು ಶುಲ್ಕ ಮರುಪಾವತಿಗೊಳಿಸುವ ಪ್ರಾಧಿಕಾರ ವಾಗಿರುತ್ತದೆ. ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಶುಲ್ಕ ಮರುಪಾವತಿಗಾಗಿ ಅನುದಾನದ ಕೊರತೆಯ ಕಾರಣಗಳಿಗಾಗಿ ವಿಳಂಬವಾಗುತ್ತಿದ್ದು, ಆ ವಿದ್ಯಾರ್ಥಿಗಳ ವ್ಯಾಸಂಗದ ಹಿತದೃಷ್ಟಿಯಿಂದ ಸಮಾಜ ಕಲ್ಯಾಣ ಇಲಾಖೆಯ ವಿಶೇಷ ಘಟಕ ಯೋಜನೆಯಡಿ ಗುಂಪುಗೂಡಿಸಿದ ಅನುದಾನದಿಂದ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ ಇವರಿಗೆ 2003–04ನೇ ಸಾಲಿನಲ್ಲಿ ಒಟ್ಟು ರೂ.41.05 ಲಕ್ಷಗಳು ಮತ್ತು 2004–05ನೇ ಸಾಲಿನಲ್ಲಿ ರೂ.75.00 ಲಕ್ಷಗಳನ್ನು ಶುಲ್ಕ ಮರುಪಾವತಿಗಾಗಿ ಬಿಡುಗಡೆಗೊಳಿಸಿದೆ.